ಕರ್ನಾಟಕ ಸರ್ಕಾರ

*ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12.*

ಸಂಖ್ಯೆ:ಪಪೂಶಿಇ/ ಶೈ.ಶಾ-04/ಕಾ.ಬ.ಕು-04/2015-16 ದಿನಾಂಕ: 15-07-2015

## ಸುತ್ತೋಲೆ

ವಿಷಯ: ರಾಜ್ಯದ ಸರ್ಕಾರಿ, ಅನುದಾನಿತ ಹಾಗೂ ಅನುದಾನ ರಹಿತ ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರಥಮ ಮತ್ತು ದ್ವಿತೀಯ ಪಿಯುಸಿಗೆ ದಾಖಲಾತಿ ಪಡೆದಿರುವ ವಿದ್ಯಾರ್ಥಿಗಳಿಗೆ ಕಾಲೇಜು ಬದಲಾವಣೆಗೆ ಅನುಮತಿ ನೀಡುವ ಕುರಿತು.

ಉಲ್ಲೇಖ: ವಿದ್ಯಾರ್ಥಿಗಳು ಹಾಗೂ ಪೋಷಕರ ಮನವಿಗಳ ಮೇರೆಗೆ.

********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2015-16ನೇ ಸಾಲಿನಲ್ಲಿ ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಹಾಗೂ ಅನುದಾನ ರಹಿತ ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರಥಮ ಮತ್ತು ದ್ವಿತೀಯ ಪಿಯುಸಿ ತರಗತಿಗಳಿಗೆ ನಿಗಧಿತ ದಿನಾಂಕದೊಳಗೆ ದಾಖಲಾತಿಯನ್ನು ಪಡೆದಿರುವ ವಿದ್ಯಾರ್ಥಿಗಳಿಗೆ ಮಾತ್ರ ದಿನಾಂಕ: 31-07-2015 ರವರೆಗೆ ಅಂತಿಮವಾಗಿ ಕಾಲೇಜು ಬದಲಾವಣೆಗೆ ಈ ಕೆಳಕಂಡ ಷರತ್ತುಗಳ ಮೇರೆಗೆ ದಿನಾಂಕವನ್ನು ವಿಸ್ತರಿಸಿದೆ.

1. ಪೋಷಕರ ವರ್ಗಾವಣೆ, ವೈದ್ಯಕೀಯ ಹಾಗೂ ಕೌಟುಂಬಿಕ ಕಾರಣ.
2. ಕಾಲೇಜು ಬದಲಾವಣೆ ಕೋರಿದ್ದಲ್ಲಿ ಅಂತಹ ವಿದ್ಯಾರ್ಥಿಯು ವ್ಯಾಸಂಗ ಮಾಡುತ್ತಿರುವ ಕಾಲೇಜಿನಿಂದ ವಿಷಯವಾರು ಹಾಜರಾತಿಯನ್ನು ಅರ್ಜಿಯೊಂದಿಗೆ ಸಲ್ಲಿಸತಕ್ಕದ್ದು.
3. ವಿದ್ಯಾರ್ಥಿಯಿಂದ ಶೇ75%ರಷ್ಟು ಹಾಜರಾತಿಯನ್ನು ಕಾಯ್ದುಕೊಳ್ಳುವ ಷರತ್ತನ್ನು ವಿಧಿಸಿ ಮುಚ್ಚಳಿಕೆಯ ಪತ್ರವನ್ನು ಕಡ್ಡಾಯವಾಗಿ ಪಡೆಯುವುದು.
4. ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರಿಂದ ಅನುಮೋದನೆಯನ್ನು ಪಡೆದ ನಂತರವೇ ಕಾಲೇಜಿನ ಪ್ರಾಂಶುಪಾಲರು ನಿಯಮಾನುಸಾರ ವಿದ್ಯಾರ್ಥಿಯನ್ನು ದಾಖಲಾತಿ ಮಾಡಿಕೊಳ್ಳುವುದು.
5. ದಾಖಲಾತಿ ಪಡೆದ ವಿದ್ಯಾರ್ಥಿಯ ವಿವರ, ಅರ್ಜಿ ಹಾಗೂ ಪಾವತಿಸಿದ ಶುಲ್ಕದ ಮೂಲ ಚಲನ್‌ಗಳೊಂದಿಗೆ ಮಾಹಿತಿಯನ್ನು ನಿರ್ದೇಶನಾಲಯದ ಜಂಟಿ ನಿರ್ದೇಶಕರು(ಶೈಕ್ಷಣಿಕ), ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡ ರಸ್ತೆ, ಮಲ್ಲೇಶ್ವರಂ, ಬೆಂಗಳೂರು ರವರಿಗೆ ಮರುಟಪಾಲಿನಲ್ಲಿ ಸಲ್ಲಿಸಲು ತಿಳಿಸಿದೆ.

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿಗಳು:

1. ನಿರ್ದೇಶಕರ ಆಪ್ತ ಶಾಖೆ ಪದವಿ ಪೂರ್ವ ಶಿಕ್ಷಣ ಇಲಾಖೆ, ಮಾಹಿತಿಗಾಗಿ
2. ಇ-ಆಡಳಿತ ಶಾಖೆ ಪದವಿ ಪೂರ್ವ ಶಿಕ್ಷಣ ಇಲಾಖೆ, ವೆಬ್‌ಸೈಟ್‌ನಲ್ಲಿ ಅಳವಡಿಸಲು ಮುಂದಿನ ಕ್ರಮಕ್ಕಾಗಿ.
3. ಕಛೇರಿ ಪ್ರತಿ